ಡಿ. ಡಬ್ಲ್ಯೂಃ 1

ದಿಃ 29 -03-2022 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲುಃ ಶ್ರೀ ಜಿ.ಎಸ್.ಎ. ವಾದಿ ಪರ ವಕೀಲರಿಂದ ಃ

ದಾವಾ ಆಸ್ತಿಯು ಯಲ್ಲನಗೌಡ ಸಂಗನಗೌಡ ಪಾಟೀಲ ಇವರ ಹೆಸರಿಗೆ ಇತ್ತು. ಸದರಿ ದಾವಾ ಆಸ್ತಿಯ ಉತರಾದಲ್ಲಿ ನನ್ನ ಹೆಸರು ವಾರಸಾ ನಾತೆಯಿಂದ ಸೇರಿಸಲಾಗಿತ್ತು. 1 ನೇ ಪ್ರತಿವಾದಿಯ ಜೊತೆ 2 ನೇ ಪ್ರತಿವಾದಿಯು ಮೀಲಾಪಿಯಾಗಿ ತನ್ನ ಹೆಸರು ದಾವಾ ಆಸ್ತಿಯ ಉತಾರದಲ್ಲಿ ಸೇರಿಸಿಕೊಂಡಿದ್ದರು ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಯ ಮತ್ತು 2 ನೇ ಪ್ರತಿವಾದಿಗೆ ದಾವಾ ಆಸ್ತಿಯಲ್ಲಿ ಯಾವುದೇ ಹಕ್ಕು ಇರುವುದಿಲ್ಲ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಯ ಮತ್ತು 2 ನೇ ಪ್ರತಿವಾದಿಗೆ ದಾವಾ ಆಸ್ತಿಯಲ್ಲಿ ಹಕ್ಕು ಇರುವ ಬಗ್ಗೆ ಉತಾರವನ್ನು ಹೊರತು ಪಡಿಸಿ ಬೇರೆ ಯಾವ ದಾಖಲೆಯನ್ನು ನೋಡಿರುತ್ತೀರಿ ಎಂಬ ಪ್ರಶ್ನೆಗೆ ಸಾಕ್ಷಿಯು ಮ್ಯುಟೇಶನ್ ದಾಖಲೆಯನ್ನು ನೋಡಿರುತ್ತೇನೆ ಎಂದು ಹೇಳುತ್ತಾರೆ. ಸದರಿ ದಾಖಲೆಯನ್ನು ಹೊರತು ಪಡಿಸಿ ಖರೀದಿ ಪತ್ರವನ್ನು ನಾನು ನೋಡಿರುವುದಿಲ್ಲ. ಖರೀದಿ ಪತ್ರವನ್ನು ನೋಡಲು ನನಗೆ ಯಾವುದೇ ತೊಂದರೆ ಇರಲಿಲ್ಲ ಎಂದರೆ ಸರಿ. ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿ ಬರೆಸಿರುವ ವಿಷಯ ಎಲ್ಲಾ ಸುಳ್ಳು ಇರುತ್ತದೆ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಯ ಮತ್ತು 2 ನೇ ಪ್ರತಿವಾದಿ ಸೇರಿ ಖೊಟ್ಟಿ ಖರೀದಿ ಪತ್ರವನ್ನು ಸೃಷ್ಠಿ ಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಯು ಇವತ್ತಿಗೂ ವಾದಿಯರ ಹೆಸರಿನಲ್ಲಿ ಇದ್ದು ಅವರೇ ಕಬ್ಜಾದಲ್ಲಿ ಇರುತ್ತಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಗೆ ನನಗೆ ಯಾವುದೇ ಹಕ್ಕು ಇರುವುದಿಲ್ಲ ಎಂದರೆ ಸರಿಯಲ್ಲ. ಸದರ ದಾವಾ ಆಸ್ತಿಯ ಬಗ್ಗೆ ಕಂದಾಯ ಇಲಾಖೆಯಲ್ಲಿ ದಾವೆ ಇರುವ ಬಗ್ಗೆ ಮಾಹಿತಿ ಇದ್ದರು ಕೂಡ

ಖೊಟ್ಟಿ ಖರೀದಿ ಪತ್ರ ಮಾಡಿಕೊಂಡಿರುತ್ತೇವೆ ಎಂದರೆ ಸರಿಯಲ್ಲ. ಕಂದಾಯ ಇಲಾಖೆಯಲ್ಲಿ ದಿವಾಣಿ ನ್ಯಾಯಾಲಯದಲ್ಲಿ ದಾವೆಯನ್ನು ಸಲ್ಲಿಸಬೆಕೆಂದು ಆದೇಶ ಆಗಿರುವ ಬಗ್ಗೆ ನನಗೆ ಮಾಹಿತಿ ಇತ್ತು ಎಂದರೆ ಸರಿಯಲ್ಲ. ದಾವೆ ಚಾಲ್ತಿಯಲ್ಲಿರುವಾಗ ಒಂದು ಖೊಟ್ಟಿ ಖರೀದಿ ಪತ್ರವನ್ನು ತಯಾರಿಸಿ ನನ್ನನ್ನು ಈ ದಾವೆಯಲ್ಲಿ ಪಕ್ಷಗಾರರಾಗಿ ಸೇರಿಸಬೇಕೆಂದು ಹೇಳಿ ಈ ದಿನ ಸುಳ್ಳು ಸಾಕ್ಷಿಯನ್ನು ನುಡಿಯುತ್ತೀದ್ದೇನೆ ಎಂದರೆ ಸರಿಯಲ್ಲ.

ಪ್ರತಿವಾದಿ ನಂ**. 6** ಮತ್ತು **11**ರ ಪರ ವಕೀಲರು ಗೈರು ಹಾಜರು ಇರುವುದರಿಂದ ಪಾಟೀಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು**.**

ಪ್ರತಿವಾದಿ ನಂ. 7 ರಿಂದ 10 ಪರ ವಕೀಲರು ಸುಯ ಕೋರಿದ್ದರಿಂದ ಪಾಟಿಸವಾಲು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇಲೆ ಬೆರಳಚ್ಚು ಮಾಡಲಾಯಿತು.)

ಓ ಹೆ ಕೆ ಸರಿ ಅದೆ.

Sd/-29-03-22
ಸಿವಿಲ್ ನ್ಯಾಯಾಧೀಶರು, ಶಿಗ್ಗಾಂವ.